ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	1589
ಸದಸ್ಯರ ಹೆಸರು	:	ಶ್ರೀ ಗೋವಿಂದ ರಾಜು.
ಉತ್ತರಿಸಬೇಕಾದ ದಿನಾಂಕ	:	24-09-2021
ಉತ್ತರಿಸುವ ಸಚಿವರು	:	ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕ್ರ.ಸಂ.	ಪ್ರಶ್ನೆ	ಉತ್ತರ
ಅ)	ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆ/ ಕಾಲೇಜುಗಳಿಗೆ ನೇಮಕವಾದ ಕಂಪ್ಯೂಟರ್ ಶಿಕ್ಷಕರು, ವಿಜ್ಞಾನ ಶಿಕ್ಷಕರು, ನಿಲಯಪಾಲಕರು ಮತ್ತು ಪ್ರಥಮ ದರ್ಜೆ ಸಹಾಯಕರನ್ನು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಕೇಂದ್ರ ಕಛೇರಿಗೆ ನಿಯೋಜಿಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಹೌದು. ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಡಿಯಲ್ಲಿ ಒಟ್ಟು 826 ವಸತಿ ಶಾಲೆ/ಕಾಲೇಜುಗಳು ಕಾರ್ಯನಿರ್ವಹಿಸುತ್ತಿವೆ. ಸಂಘದ ಕೇಂದ್ರ ಕಛೇರಿಯಲ್ಲಿ ಹೆಚ್ಚಿನ ಕಾರ್ಯ ಒತ್ತಡದಿಂದ, ಅಗತ್ಯದಷ್ಟು ಸಿಬ್ಬಂದಿಗಳ ಮಂಜೂರಾತಿ ಪ್ರಕ್ರಿಯೆ ಪೂರ್ಣಗೊಂಡಿರದೇ ಇರುವುದರಿಂದ ಹಾಗೂ ಸಂಘದ ಆಡಳಿತಾತ್ಮಕ ಹಿತದೃಷ್ಟಿಯಿಂದ ತಾತ್ಕಾಲಿಕವಾಗಿ ಅನಿವಾರ್ಯವಾಗಿ ಕೆಲವು ವಸತಿ ಶಾಲೆಗಳ ಕಂಪ್ಯೂಟರ್ ಶಿಕ್ಷಕರು, ನಿಲಯಪಾಲಕರು ಮತ್ತು ಪ್ರಥಮ ದರ್ಜೆ ಸಹಾಯಕರುಗಳನ್ನು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಕೇಂದ್ರ ಕಛೇರಿಗೆ ನಿಯೋಜನೆ ಮೇರೆಗೆ ತೆಗೆದುಕೊಳ್ಳಲಾಗಿರುತ್ತದೆ. ಸದರಿ ವಸತಿ ಶಾಲೆಗಳಲ್ಲಿನ ಮೇಲ್ಕಂಡ ಸಿಬ್ಬಂದಿಯ ಕಾರ್ಯಭಾರವನ್ನು ಇತರೆ ಪ್ರಥಮ ದರ್ಜೆ ಸಹಾಯಕರು ಕಂ ಕಪ್ಯೂಟರ್ ಆಪರೇಟರ್, ಇತರೆ ಶಿಕ್ಷಕರು ಹೆಚ್ಚುವರಿಯಾಗಿ ಕಾರ್ಯನಿರ್ವಹಿಸುತ್ತಿರುತ್ತಾರೆ.
ಆ)	ಬಂದಿದ್ದಲ್ಲಿ, ವಸತಿ ಶಾಲೆಗಳಲ್ಲಿ ಈ ಸಿಬ್ಬಂದಿಗಳು ನಿರ್ವಹಿಸಬೇಕಾದ ಕೆಲಸವನ್ನು ಯಾರು ನಿರ್ವಹಿಸುತ್ತಿದ್ದಾರೆ ಈ ಶಾಲೆಗಳಿಗೆ ಸದರಿ ಸಿಬ್ಬಂದಿಗಳ ಅಗತ್ಯವಿಲ್ಲವೇ;(ವಿವರ ನೀಡುವುದು)	
ಇ)	ಸಂಘದ ಕೇಂದ್ರ ಕಛೇರಿಯಲ್ಲಿ ಈ ಸಿಬ್ಬಂದಿಗಳಿಗೆ ನೀಡಿರುವ ಹುದ್ದೆಗಳು ಯಾವುವು ; ಇವರಿಗೆ ಶಿಕ್ಷಕರ ವೇತನವನ್ನು ನೀಡಲಾಗುತ್ತಿದ್ದೆಯೇ ಅಥವಾ ಕೇಂದ್ರ ಕಛೇರಿಯಲ್ಲಿ ನಿರ್ವಹಿಸುತ್ತಿರುವ ಹುದ್ದೆಯ ವೇತನವನ್ನು ನೀಡಲಾಗಿದೆಯೇ; (ವಿವರ ನೀಡುವುದು)	ಸಂಘದ ಕೇಂದ್ರ ಕಛೇರಿಯಲ್ಲಿ ನಿಯೋಜನೆ ಮೇರೆಗೆ ವಸತಿ ಶಾಲೆಗಳಿಂದ ತಾತ್ಕಾಲಿಕವಾಗಿ ತೆಗೆದುಕೊಂಡಿರುವ ಸಿಬ್ಬಂದಿಗಳಿಗೆ ಸಂಘದ ಕೇಂದ್ರ ಕಛೇರಿಯ ಕಛೇರಿ ಅಧೀಕ್ಷಕರು, ವಿವಿಧ ಶಾಖೆಗಳ ವಿಷಯ ನಿರ್ವಾಹಕರು ಮತ್ತು ಪ್ರೋಗ್ರಾಮ್ ಡೆವಲ್ಪರ್ ಹುದ್ದೆಗಳಲ್ಲಿ ಕಾರ್ಯನಿರ್ವಹಿಸುತ್ತಿರುತ್ತಾರೆ. ಸದರಿ ಸಿಬ್ಬಂದಿಗಳಿಗೆ, ಅವರು ನೇಮಕಗೊಂಡ ಹುದ್ದೆಯ ವೇತನವನ್ನು

		ಪಾವತಿಸಲಾಗುತ್ತಿರುತ್ತದೆ.
ಈ)	ವಸತಿ ಶಾಲೆಗಳಲ್ಲಿ ಆನ್‌ಲೈನ್ ಶಿಕ್ಷಣ ವ್ಯವಸ್ಥೆ ಜಾರಿಯಲ್ಲಿದ್ದರೂ ಸಹ ಆಯಾ ಗ್ರಾಮೀಣ ಭಾಗದ ವಸತಿ ಶಾಲೆ ಮಕ್ಕಳಿಗೆ ಕಂಪ್ಯೂಟರ್ ಶಿಕ್ಷಕರು ಇಲ್ಲದೇ ತೊಂದರೆಯಾಗಿರುವುದರ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ;	ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಕೇಂದ್ರ ಕಛೇರಿಯಲ್ಲಿನ ಕಾರ್ಯ ಒತ್ತಡದಿಂದ ಅನಿವಾರ್ಯವಾಗಿ ಕೆಲವೇ ಕೆಲವು ಕಂಪ್ಯೂಟರ್ ಶಿಕ್ಷಕರನ್ನು ತಾತ್ಕಾಲಿಕವಾಗಿ ಕೇಂದ್ರ ಕಛೇರಿಗೆ ಆಡಳಿತಾತ್ಮಕ ಹಿತದೃಷ್ಠಿಯಿಂದ ನಿಯೋಜಿಸಲಾಗಿದ್ದು, ಸದರಿಯವರ ಕಾರ್ಯಭಾರವನ್ನು ತಾತ್ಕಾಲಿಕವಾಗಿ ಇತರೆ ವಿಷಯ ಶಿಕ್ಷಕರು ನಿರ್ವಹಿಸುತ್ತಿರುತ್ತಾರೆ. ಆದ್ದರಿಂದ ಆನ್‌ಲೈನ್ ಶಿಕ್ಷಣ ವ್ಯವಸ್ಥೆಯಲ್ಲಿ ಈ ಕೆಲವು ಶಾಲಾ/ಕಾಲೇಜುಗಳಿಗೆ ಯಾವುದೇ ತೊಂದರೆ ಉಂಟಾಗಿರುವುದಿಲ್ಲ.
ಉ)	ಯಾವ ಕಾಲ ಮಿತಿಯಲ್ಲಿ ವಸತಿ ಶಾಲೆಗಳ ನಿಯೋಜಿತ ಸಿಬ್ಬಂದಿಗಳನ್ನು ಆಯಾ ವಸತಿ ಶಾಲೆಗಳಿಗೆ ವಾಪಸ್ಸು ಕಳುಹಿಸಿ ಮಕ್ಕಳ ವಿದ್ಯಾಭ್ಯಾಸಕ್ಕೆ ಅನುಕೂಲ ಕಲ್ಪಿಸಲಾಗುವುದು?	ಸಂಘದ ಮತ್ತು ವಸತಿ ಶಾಲೆಗಳ ಹಿತದೃಷ್ಠಿಯನ್ನು ಗಮನದಲ್ಲಿಟ್ಟುಕೊಂಡು ಈ ಬಗ್ಗೆ ಪರಿಶೀಲಿಸಿ ಶೀಘ್ರದಲ್ಲಿ ಕ್ರಮವಹಿಸಲಾಗುವುದು.

ಸಂಖ್ಯೆ: ಸಕಇ 419 ಮೊದೇಶಾ 2021

(ಕೋಟ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಮತ್ತು
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು